# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 147

ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ.

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 05-07-2023

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು ಶಾಲಾ ಮಕ್ಕಳು, ವೃದ್ಧರು ಸರ್ಕಾರಿ ಬಸ್‌ನಲ್ಲಿ ಸಂಚರಿಸಲು ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶಾಲಾ ಸಮಯದಲ್ಲಿ ಹೆಚ್ಚುವರಿ ಬಸ್ ಸಂಚಾರಕ್ಕೆ ವ್ಯವಸ್ಥೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳಿಂದ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಶಾಲಾ ಮಕ್ಕಳು ಹಾಗೂ ವೃದ್ಧರಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ, ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.<br><br>ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಅವರ ಶಾಲಾ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ:<br><br>• ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ-ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ-ಕಾಲೇಜುಗಳ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳಲು.<br><br>• ಶಾಲಾ/ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸಲು.<br><br>• ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ-ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ಇಳಿಸಿಕೊಳ್ಳುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ತಿಳುವಳಿಕೆ ನೀಡಲು.<br><br>ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಗ್ರಾಮೀಣ ಭಾಗದ ಶಾಲಾ-ಕಾಲೇಜು ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಅದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೋಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

| | | |
|---|---|---|
| ಆ. | ಹಾವೇರಿ ಜಿಲ್ಲೆಯಲ್ಲಿ ಶಕ್ತಿ ಯೋಜನೆಯ ಕಾರಣದಿಂದ ಬಸ್ ನಲ್ಲಿ ಉಂಟಾದ ನೂಕು ನುಗ್ಗಲಿನಿಂದ ಶಾಲಾ ಬಾಲಕಿಯೊಬ್ಬರು ಕೆಳಗೆ ಬಿದ್ದು ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರೀತಿಯ ಘಟನೆ ಮರುಕಳಿಸದಂತೆ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು; | ಸರ್ಕಾರದ ಗಮನಕ್ಕೆ ಬಂದಿದೆ.<br><br>ಈ ರೀತಿಯ ಘಟನೆ ಮರುಕಳಿಸದಂತೆ ಮಾಡಲು ಹಾಗೂ ಸಾರ್ವಜನಿಕ ಸಾರಿಗೆಯನ್ನು ಮಕ್ಕಳ ಸಂಚಾರಕ್ಕಾಗಿ ಸುರಕ್ಷಿತ ಮತ್ತು ಜನಸ್ನೇಹಿಯನ್ನಾಗಿ ಮಾಡಲು ಕ್ರಮ ಕೈಗೊಂಡಿರುವ ಕುರಿತು ಪ್ರಶ್ನೆ 'ಅ'ರಲ್ಲಿ ಉತ್ತರಿಸಲಾಗಿದೆ<br><br>ಮುಂದುವರೆದು, ಸಾರ್ವಜನಿಕ ಸಾರಿಗೆಯನ್ನು ಮಕ್ಕಳ ಮತ್ತು ವೃದ್ಧರ ಸಂಚಾರಕ್ಕಾಗಿ ಸುರಕ್ಷಿತ ಮತ್ತು ಜನಸ್ನೇಹಿಯನ್ನಾಗಿ ಮಾಡಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ: |
| ಇ. | ಸಾರ್ವಜನಿಕ ಸಾರಿಗೆಯನ್ನು ಮಕ್ಕಳ ಮತ್ತು ವೃದ್ಧರ ಸಂಚಾರಕ್ಕಾಗಿ ಸುರಕ್ಷಿತ ಮತ್ತು ಜನಸ್ನೇಹಿಯನ್ನಾಗಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | • ಚಾಲನಾ ಸಿಬ್ಬಂದಿಗಳು ವಾಹನವನ್ನು ಘಟಕದಿಂದ ಕಾರ್ಯಾಚರಣೆಗೆ ತೆಗೆದುಕೊಂಡು ಹೋಗುವ ಮೊದಲು ವಾಹನದ ಬಾಗಿಲುಗಳು ಸುಸ್ಥಿತಿಯಲ್ಲಿರುವ ಬಗ್ಗೆ ಖಾತ್ರಿಪಡಿಸಿ ಕೊಳ್ಳಲು ತಿಳಿಸಲಾಗಿದೆ.<br><br>• ಪ್ರತಿಯೊಂದು ಬಸ್ ನಿಲ್ದಾಣಗಳಲ್ಲಿ ವಾಹನದ ನಿರ್ವಾಹಕರು ವಾಹನದ ಹಿಂದಿನ ಬಾಗಿಲನ್ನು ಮುಚ್ಚಿರುವ ಬಗ್ಗೆ ಖಾತ್ರಿಪಡಿಸಿಕೊಂಡು, ಚಾಲಕರಿಗೆ ಸೂಚನೆ ನೀಡಿದ ನಂತರವೇ ಚಾಲಕರು ವಾಹನವನ್ನು ಚಾಲನೆ ಮಾಡಲು ತಿಳಿಸಲಾಗಿದೆ.<br><br>• ವಾಹನದ ಫುಟ್‌ಬೋರ್ಡ್‌ನಲ್ಲಿ ಪ್ರಯಾಣಿಕರು ನಿಂತು ಪ್ರಯಾಣಿಸಲು ಅವಕಾಶ ನೀಡದಂತೆ ಕ್ರಮ ಕೈಗೊಳ್ಳಲು ತಿಳಿಸಲಾಗಿದೆ.<br><br>• ಚಾಲಕರು ವಾಹನದ ಮುಂದಿನ/ಹಿಂದಿನ ಬಾಗಿಲನ್ನು ಮುಚ್ಚಿರುವ ಬಗ್ಗೆ ಖಾತ್ರಿಪಡಿಸಿಕೊಂಡು ವಾಹನ ಚಾಲನೆ ಮಾಡುವಂತೆ ತಿಳಿಸಲಾಗಿದೆ.<br><br>• ಬಸ್ ನಿಲ್ದಾಣ ತಲುಪುವದಕ್ಕೂ ಮುಂಚೆ ವಾಹನದ ಬಾಗಿಲನ್ನು ತೆರೆಯದೆ, ಬಸ್ ನಿಲ್ದಾಣ/ನಿಲುಗಡೆ ಸ್ಥಳದಲ್ಲಿ ಬಸ್ ನಿಲ್ಲಿಸಿದ ನಂತರವೇ ಬಾಗಿಲನ್ನು ತೆರೆದು ಪ್ರಯಾಣಿಕರನ್ನು ಇಳಿಸುವಂತೆ ಸೂಚಿಸಲಾಗಿದೆ. |

ಸಂಖ್ಯೆ: ಟಿಡಿ 77 ಟಿಸಿಕ್ಯೂ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು